Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

21.01.2025 18.40 hrs

<><*<><>*><>

<u>ಮುಖ್ಯಾಂಶಗಳು</u>

- ಬೆಳಗಾವಿಯಲ್ಲಿ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ' ಸಮಾವೇಶ ಉದ್ಘಾಟಿಸಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ
- ತುಮಕೂರು ರೈಲು ನಿಲ್ದಾಣಕ್ಕೆ ಶ್ರೀ ಶಿವಕುಮಾರ ಸ್ವಾಮೀಜಿ ಹೆಸರು ನಾಮಕರಣ - ಕೇಂದ್ರ ಸಚಿವ ವಿ. ಸೋಮಣ್ಣ
- ಹಿರಿಯ ಸಾಹಿತಿ ಗೊ.ರು. ಚನ್ನಬಸಪ್ಪ ಅವರಿಗೆ ಸಿದ್ದಗಂಗಾ ಪ್ರಶಸ್ತಿ ಪ್ರದಾನ
- ರಾಜ್ಯಾದ್ಯಂತ ಇಂದು ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಆಚರಣೆ

<><*<><>*><>

ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ ೧೯೨೪ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ನಿಮಿತ್ತ ಕಾಂಗ್ರೆಸ್ ಪಕ್ಷ ಇಂದು ಬೆಳಗಾವಿಯ ಸಿಪಿಎಡ್ ಮೈದಾನದಲ್ಲಿ ಆಯೋಜಿಸಿದ್ದ 'ಜೈ ಬಾಪು, ಜೈ ಭೀಮ್, ಜೈ ಸಂವಿಧಾನ' ಸಮಾವೇಶವನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜು ಖರ್ಗೆ ಉದ್ಘಾಟಿಸಿದರು. ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಂಸದೆ ಪ್ರಿಯಾಂಕ ಗಾಂಧಿ, ಎಐಸಿಸಿ ಕಾಯದರ್ಶಿಗಳಾದ ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೆವಾಲ, ಸಚಿವರಾದ ಎಚ್.ಕೆ.ಪಾಟೀಲ್, ಎಂ.ಬಿ.ಪಾಟೀಲ್, ಸತೀಶ್ ಜಾರಕಿಹೊಳಿ ಸೇರಿದಂತೆ ಸಚಿವರು, ಸಂಸದರು ಉಪಸ್ಥಿತರಿದ್ದರು. ಈ ವೇಳೆ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಮನಮೋಹನ ಸಿಂಗ್ ನೇತೃತ್ವದ ಯುಪಿಎ ಸರ್ಕಾರದ ಆಡಳಿತದ ಸಂದರ್ಭದಲ್ಲಿ ದೇಶದ ನಿವ್ವಳ ಆದಾಯ ಪ್ರಮಾಣ-ಜಿಡಿಪಿ ಶೇಕಡಾ ೧೦ ರಷ್ಟು ಏರಿತ್ತು. ಆದರೆ, ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ಜಿಡಿಪಿ ಶೇಕಡಾ ೭.೮ ರಷ್ಟು ಇದೆ ಎಂದು ಆರೋಪಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿ, ದೇಶದ ಪ್ರತಿಯೊಬ್ಬರ ಸಾತಂತ್ರ್ಯ, ಸಮಾನತೆ, ಭಾತೃತ್ವ, ಸಹ ಜೀವನವನ್ನು ಸಂವಿಧಾನ ಸಂರಕ್ಷಿಸುತ್ತದೆ. ಎಲ್ಲರನ್ನು ಮಾನವೀಯವಾಗಿ ಕಂಡು ಸಾಮರಸ್ಯದ ಬಾಳು ನಡೆಸಬೇಕಾಗಿದೆ ಎಂದರು.

<><*<><>*><>

ತುಮಕೂರು ರೈಲು ನಿಲ್ದಾಣವನ್ನು ೧೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನವೀಕರಣಗೊಳಿಸಿ, ಶ್ರೀ ಶಿವಕುಮಾರ ಸ್ವಾಮೀಜಿ ಅವರ ಹೆಸರನ್ನು ಇಡಲಾಗುವುದು ಎಂದು ಕೇಂದ್ರದ ಜಲಶಕ್ತಿ ಹಾಗೂ ರೈಲ್ವೇ ಖಾತೆಯ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಸಿದ್ಧಗಂಗಾ ಮಠದಲ್ಲಿ ನಡೆದ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರ ೬ನೇ ಪುಣ್ಯಸ್ಮರಣೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ

ರಾಯದುರ್ಗ-ತುಮಕೂರು, ತುಮಕೂರು-ದಾವಣಗೆರೆ ಸುಮಾರು ೪೦೦ ಕಿಲೋ ಮೀಟರ್ ಹೆಚ್ಚು ದೂರದ ರೈಲು ಮಾರ್ಗದ ನಿರ್ಮಾಣ ಕಾಮಗಾರಿಗಳು ಭರದಿಂದ ಸಾಗಿವೆ. ಮುಂದಿನ ೨ ವರ್ಷದೊಳಗೆ ಜಿಲ್ಲೆಯ ೨೩ ಕಡೆ ರೈಲ್ವೆ ಮೇಲ್ಸೇತುವೆಯನ್ನು ಅಭಿವೃದ್ಧಿಪಡಿಸುವ ಸಂಕಲ್ಪ ಮಾಡಲಾಗಿದೆ ಎಂದರು.

ಸಮಾಜದಲ್ಲಿ ಆಶ್ರಯವಿಲ್ಲದ ಎಲ್ಲ ವರ್ಗದವರಿಗೆ ಆಶ್ರಯ ನೀಡಿ ಅನ್ನ, ಅಕ್ಷರ, ದಾಸೋಹವನ್ನು ಉಣಬಡಿಸುವ ಮೂಲಕ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರು ವಿಶ್ವಕ್ಕೆ ಮಾದರಿಯಾಗಿದ್ದಾರೆ. ಸಿದ್ಧಗಂಗಾ ಶ್ರೀಗಳಾದ ಲಿಂಗೈಕ್ಯ ಶಿವಕುಮಾರ ಸ್ವಾಮೀಜಿಯವರ ಸಂಸ್ಮರಣಾ ದಿನವನ್ನು ದಾಸೋಹ ದಿನವನ್ನಾಗಿ ಘೋಷಿಸಿ, ರಾಜ್ಯದಾದ್ಯಂತ ಆಚರಣೆಯನ್ನು ಕಾರ್ಯರೂಪಕ್ಕೆ ತರಬೇಕೆಂದು ಇದೇ ವೇಳೆ ಸಚಿವ ವಿ.ಸೋಮಣ್ಣ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು.

<><*<><>*><>

ಡಾ. ಶಿವಕುಮಾರ್ ಮಹಾಸ್ವಾಮೀಜಿಯವರ ಜೀವನ ಪಯಣವು ಸೇವೆ, ಸಮರ್ಪಣೆ ಮತ್ತು ಪರೋಪಕಾರದ ವಿಶಿಷ್ಟ ಉದಾಹರಣೆಯಾಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ತುಮಕೂರಿನ ಶ್ರೀ ಸಿದ್ದಗಂಗಾ ಮಠದಲ್ಲಿ ಶ್ರೀ ಶಿವಕುಮಾರ ಮಹಾಶಿವಯೋಗಿಗಳ ೬ನೇ ಪುಣ್ಯ ಸಂಸ್ಮರಣೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು. ನಿಜವಾದ ಮಾನವೀಯತೆಯು ಜಾತಿ, ಧರ್ಮ ಮತ್ತು ಭೌತಿಕತೆಯನ್ನು ಮೀರಿದೆ ಎಂದು ಶ್ರೀ ಶಿವಕುಮಾರ ಮಹಾಸ್ವಾಮೀಜಿ ಅವರ ಜೀವನ ನಮಗೆ ಕಲಿಸುತ್ತದೆ. ಅವರ ಕೊಡುಗೆ ಸದಾ ಸ್ಫೂರ್ತಿದಾಯಕವಾಗಿರುತ್ತದೆ. ಅವರು ಸರಳ ಜೀವನ ಮತ್ತು ಉನ್ನತ ಚಿಂತನೆಯ ತತ್ವವನ್ನು ಅನುಸರಿಸಿ, ಇತರರನ್ನು ಅದೇ ಮಾರ್ಗ ಅನುಸರಿಸಲು ಪ್ರೇರೇಪಿಸಿದರು ಎಂದರು. ಭಾರತೀಯ ಸಂಸ್ಕೃತಿಯು ಅನಂತವಾದುದು. ಇದನ್ನು ನಮ್ಮ ಸಂತರು ಅನಾದಿ ಕಾಲದಿಂದಲೂ ನಿರಂತರವಾಗಿ ರಕ್ಷಿಸುತ್ತಿದ್ದಾರೆ. ನಮ್ಮ ಸಂಸ್ಕೃತಿ ಯಾವಾಗಲೂ ವಿಶ್ವ ಸಹೋದರತ್ವ, ವಿಶ್ವ ಶಾಂತಿ, ಸಮಾನತೆ ಮತ್ತು ಸಾಮರಸ್ಯವನ್ನು ಪ್ರೇರೇಪಿಸುತ್ತದೆ. ನಮ್ಮ ಧರ್ಮ ಏಕತೆ ಮತ್ತು ಸಮಗ್ರತೆಯನ್ನು ಸಾರುತ್ತದೆ. ಸನಾತನ ಧರ್ಮದ ಪರಂಪರೆಯನ್ನು ಶ್ರೀಮಂತಗೊಳಿಸಲು ಸಾಧುಗಳು ಮತ್ತು ಸಂತರು ದೊಡ್ಡ ಕೊಡುಗೆ ನೀಡಿದ್ದಾರೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ಇದೇ ವೇಳೆ ಹಿರಿಯ ಸಾಹಿತಿ ಗೊ.ರು. ಚನ್ನಬಸಪ್ಪ ಅವರಿಗೆ ಸಿದ್ದಗಂಗಾ ಪ್ರಶಸ್ತಿ ಪ್ರದಾನ ಮಾಡಲಾಯಿತು

<><*<><>*><>

ಕರ್ನಾಟಕದ ಇತಿಹಾಸ ಮತ್ತು ಕನ್ನಡ ಸಾಹಿತ್ಯ ಚರಿತ್ರೆಯಲ್ಲಿ ೧೨ನೇ ಶತಮಾನ ಅತ್ಯಂತ ಮಹತ್ವದ ಘಟ್ಟವಾಗಿದ್ದು, ಸಮಾಜದಲ್ಲಿನ ಹಲವು ತಾರತಮ್ಯಗಳನ್ನು ಹೋಗಲಾಡಿಸಲು ಶಿವಶರಣರು ಕ್ರಾಂತಿಕಾರಿ ಹೋರಾಟಗಳನ್ನು ನಡೆಸಿದರು ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಹೇಳಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಕಾರ್ಯಕ್ರಮದಲ್ಲಿ ಅಂಬಿಗರ ಚೌಡಯ್ಯನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ೧೨ನೇ ಶತಮಾನದ ಶಿವಶರಣರ ಚಿಂತನೆಗಳು ವಚನ ಸಾಹಿತ್ಯದ ಮೂಲಕ ನಮ್ಮೆಲ್ಲರಿಗೂ ಪ್ರೇರಣೆಯಾಗಿದೆ. ಹಲವು ತಾರತಮ್ಯಗಳ ವಿರುದ್ಧ ದನಿ ಎತ್ತುವ ಮೂಲಕ ಸಮಾಜದಲ್ಲಿನ ನಾನಾ ಅಂಕು-ಡೊಂಕುಗಳನ್ನು ತಿದ್ದಲು ಯತ್ನಿಸಿದರು ಎಂದರು. ಹನ್ನೆರಡನೇ ಶತಮಾನದ ಶರಣರಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರು ನೇರ ಮತ್ತು ನಿಷ್ಠುರ ನಡೆಯ ವ್ಯಕ್ತಿತ್ವವುಳ್ಳವರಾಗಿದ್ದರು ಎಂದು ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

ಹೇಳಿದ್ದಾರೆ. ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ನಿಜಶರಣ ಶ್ರೀ ಅಂಬಿಗರ ಚೌಡಯ್ಯ' ಜಯಂತಿ ಉದ್ದೇಶಿಸಿ ಅವರು ಮಾತನಾಡಿದರು. ಮತ್ತೊಂದೆಡೆ, ಕೊಡಗಿನಲ್ಲಿ ನಡೆದ 'ನಿಜಶರಣ ಶ್ರೀ ಅಂಬಿಗರ ಚೌಡಯ್ಯ' ಜಯಂತಿ ಕಾರ್ಯಕ್ರಮದಲ್ಲಿ ಕೊಡಗು ಜಿಲ್ಲಾಧಿಕಾರಿ ವೆಂಕಟ್ ರಾಜಾ, ಅಂಬಿಗರ ಚೌಡಯ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಗೌರವ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಅಂಬಿಗರ ಚೌಡಯ್ಯ ಅವರು ಸಮಾಜಕ್ಕೆ ನೀಡಿರುವ ಸಂದೇಶ ಮತ್ತು ಸುಧಾರಣೆಗಳ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳುವಂತಾಗಬೇಕು ಎಂದು ಹೇಳಿದರು.

<><*<><>*><>

ನವದೆಹಲಿಯ ಗಣರಾಜ್ಯೋತ್ಸವ ಪೆರೇಡ್ ವೀಕ್ಷಣೆ ಹಾಗೂ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರೊಡನೆ ಸಂವಾದದಲ್ಲಿ ಭಾಗವಹಿಸಲು ರಾಜ್ಯದಿಂದ ಸ್ವ-ಸಹಾಯ ಗುಂಪುಗಳ ೧೨ ಸದಸ್ಯರು ನಿಯೋಜನೆಗೊಂಡಿದ್ದಾರೆ. ಈ ಪೈಕಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಿಂದ ದೊಡ್ಡಬಳ್ಳಾಪುರ ತಾಲೂಕಿನ ಹಣಬೆ ಗ್ರಾಮ ಪಂಚಾಯಿತಿಯ ಶಿರವಾರ ಗ್ರಾಮದ ಕೃಷಿ ಸಖಿ ಹಾಗೂ ಸ್ವ-ಸಹಾಯ ಗುಂಪಿನ ಸದಸ್ಯೆ ಪದ್ಮಾವತಿ ಅವರನ್ನು ನಿಯೋಜನೆ ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಡಾ.ಕೆ.ಎನ್. ಅನುರಾಧ ತಿಳಿಸಿದ್ದಾರೆ. ಕೃಷಿ ಸಖಿಯಾಗಿ ಕೃಷಿ ಇಲಾಖೆ, ತೋಟಗಾರಿಕೆ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಶ್ರಮಿಸುತ್ತಿರುವ ತಮ್ಮನ್ನು ನವದೆಹಲಿಯ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಆಹ್ವಾನಿಸಿರುವ ಕುರಿತು ಪದ್ಮಾವತಿ ಅವರು ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><*<><>*><>

ಶಿವಮೊಗ್ಗ ಜಿಲ್ಲಾ ಪಂಚಾಯಿತಿ, ತೋಟಗಾರಿಕಾ ಇಲಾಖೆ ಹಾಗೂ ಇತರೆ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಫ್ರೀಡಂ ಪಾರ್ಕ್ ಆವರಣದಲ್ಲಿ ಫಲಪುಷ್ಪ ಪ್ರದರ್ಶನವನ್ನು ಇದೇ ೨೪ ರಿಂದ ೨೬ರ ವರೆಗೆ ಹಮ್ಮಿಕೊಳ್ಳಲಾಗಿದೆ. ಈ ಕುರಿತು ಮಾತನಾಡಿದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೇಮಂತ್, 'ಪುಷ್ಪ ಸಿರಿ' ಹೆಸರಿನಲ್ಲಿ ಫಲಪುಷ್ಪ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಇದೇ ವೇಳೆ ಸ್ವ-ಸಹಾಯ ಸಂಘಗಳ ಸದಸ್ಯೆಯರು ತಯಾರಿಸಿದ ಉತ್ಪನ್ನಗಳ ಪ್ರದರ್ಶನ ಹಾಗೂ ಮಾರಾಟ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಮೂರು ದಿನಗಳ ಪ್ರದರ್ಶನವನ್ನು ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಇದೇ ೨೪ ರಂದು ಉದ್ಘಾಟಿಸಲಿದ್ದಾರೆ. ಪ್ರದರ್ಶನಕ್ಕೆ ಪ್ರವೇಶ ಉಚಿತವಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

<><*<><>*><>

ಕಾನೂನು-ಸುವ್ಯವಸ್ಥೆ ಕಾಪಾಡುವಲ್ಲಿ ವಿಫಲರಾದ ರಾಜ್ಯದ ಗೃಹ ಸಚಿವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ರಾಜ್ಯ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಮಂಜುಳಾ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳಾ ಸುರಕ್ಷತೆಗೆ ಎಲ್ಲ ಅಗತ್ಯ ಕ್ರಮಗಳನ್ನು ಸರ್ಕಾರ ಕೈಗೊಳ್ಳಬೇಕು. ವಿಧಾನಸೌಧದ ಕೂಗಳತೆ ದೂರದಲ್ಲೇ ಇರುವ ಜನನಿಬಿಡ ಕೆ.ಆರ್.ಮಾರ್ಕೆಟ್ ಬಸ್ ನಿಲ್ದಾಣಕ್ಕೆ ಮಹಿಳೆಯೊಬ್ಬರು ಬಂದಾಗ, ಇಬ್ಬರು ಕಾಮುಕರು ಲೈಂಗಿಕ ದೌರ್ಜನ್ಯ ಎಸಗಿದ್ದಾರೆ. ರಾಜ್ಯದಲ್ಲಿ, ಅದರಲ್ಲೂ ಮುಖ್ಯವಾಗಿ ಬೆಂಗಳೂರಿನಲ್ಲಿ ಮಹಿಳೆಯರಿಗೆ

ಸುರಕ್ಷತೆ ಕಲ್ಪಿಸಲು ರಾಜ್ಯ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿರುವುದೇ ಇದಕ್ಕೆ ಕಾರಣ ಎಂದು ಆಕ್ಷೇಪಿಸಿದ್ದಾರೆ. ರಾಜ್ಯದಲ್ಲಿ ದರೋಡೆಗಳು ನಡೆಯುತ್ತಿದ್ದರೂ ಸರ್ಕಾರ ಯಾವುದೇ ಕ್ರಮಗಳನ್ನು ತೆಗೆದುಕೊಳ್ಳುತ್ತಿಲ್ಲ. ಅಧಿಕಾರಕ್ಕಾಗಿ ಕಿತ್ತಾಟದಲ್ಲಿ ಸರ್ಕಾರ ಮುಳುಗಿಹೋಗಿದೆ ಎಂದು ಮಂಜುಳಾ ದೂರಿದ್ದಾರೆ.

<><*<><>*><>

ಸಿರಿಧಾನ್ಯಗಳ ಉಪಯೋಗ ಕಡಿಮೆಯಾಗುತ್ತಿದ್ದು, ಇವುಗಳಲ್ಲಿರುವ ಪೌಷ್ಟಿಕಾಂಶಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಸಿರಿಧಾನ್ಯ ಜಾಥಗಳು ಅವಶ್ಯಕ ಎಂದು ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಹೇಳಿದ್ದಾರೆ. ವಿಜಯನಗರ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಮತ್ತು ಕೃಷಿ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾಮಟ್ಟದ ಸಿರಿಧಾನ್ಯ ನಡಿಗೆ ಕಾರ್ಯಕ್ರಮಕ್ಕೆ ಅವರು ಚಾಲನೆ ನೀಡಿದರು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>